# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 670(750) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 16.12.2024. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು;</td><td>ರಾಜ್ಯದಲ್ಲಿರುವ ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿವರ ಕೆಳಗಿನಂತಿವೆ:-<br>
<table>
<tr><th>ಶಾಲೆಗಳ ವಿಧ</th><th>ಶಾಲೆಗಳ ಸಂಖ್ಯೆ</th></tr>
<tr><td>ಪ್ರಾಥಮಿಕ</td><td>41589</td></tr>
<tr><td>ಪ್ರೌಢ</td><td>4871</td></tr>
<tr><td>ಒಟ್ಟು</td><td>46460</td></tr>
</table></td></tr>
<tr><td>ಆ)</td><td>ಈ ಸರ್ಕಾರಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆಯೆಷ್ಟು; ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿಯಿವೆ; (ಮಾಹಿತಿ ಒದಗಿಸುವುದು).</td><td>ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾದ, ಕಾರ್ಯನಿರತ ಮತ್ತು ಖಾಲಿಯಿರುವ ಶಿಕ್ಷಕರ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ:-<br>
<table>
<tr><th>ಶಾಲೆಗಳ ವಿಧ</th><th>ಮಂಜೂರಾದ ಹುದ್ದೆಗಳು</th><th>ಕಾರ್ಯನಿರತ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr>
<tr><td>ಪ್ರಾಥಮಿಕ ಶಾಲೆ</td><td>188531</td><td>145398</td><td>50067</td></tr>
<tr><td>ಪ್ರೌಢ ಶಾಲೆ</td><td>44406</td><td>32610</td><td>11796</td></tr>
</table></td></tr>
<tr><td>ಇ)</td><td>ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ: ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: (ವಿವರ ನೀಡುವುದು).</td><td>ಬಂದಿದೆ<br><br>1. 2022ರಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ 15,000 ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿದ್ದು, ಅದರಲ್ಲಿ ಅರ್ಹತೆ ಪಡೆದಿರುವ 13352 ಅಭ್ಯರ್ಥಿಗಳ ಪೈಕಿ ಈವರೆಗೆ 12521 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿರುತ್ತದೆ. ಉಳಿದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಪ್ರಕರಣವು ಪ್ರಸ್ತುತ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿಯಿರುತ್ತದೆ.<br><br>2. ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ:07.10.2024 ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಹಾಗೂ ಪ್ರೌಢಶಾಲೆಗಳ 385 ಹುದ್ದೆಗಳನ್ನು ಭರ್ತಿ</td></tr>
</table>

| | | |
|---|---|---|
| | | ಮಾಡಲು ಅನುಮತಿ ನೀಡಲಾಗಿರುತ್ತದೆ.<br>3. ಮುಂದುವರೆದು, ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024 ರಲ್ಲಿ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ.<br>4. ಪ್ರಸ್ತುತ, ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಖಾಯಂ ಹುದ್ದೆ ಭರ್ತಿ ಆಗುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪ್ರಾಥಮಿಕ ಶಾಲೆಗಳಿಗೆ 35000 ಮತ್ತು ಪ್ರೌಢಶಾಲೆಗಳಿಗೆ 8968 ರಂತೆ ಒಟ್ಟಾರೆ 43968 ಅತಿಥಿ ಶಿಕ್ಷಕರುಗಳನ್ನು ನೇಮಕ ಮಾಡಿಕೊಳ್ಳಲಾಗಿದೆ. |
| ಈ) | ಆರ್.ಟಿ.ಇ. ಕಾಯ್ದೆ ಪ್ರಕಾರ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯಾವ ಅನುಪಾತದಲ್ಲಿ ಶಿಕ್ಷಕರಿರಬೇಕು? (ವಿವರ ನೀಡುವುದು). | **ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br>• ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ ಕಿರಿಯ ಪ್ರಾಥಮಿಕ (1-5) ತರಗತಿಗಳಿರುವ ಶಾಲೆಗಳಿಗೆ 1 ರಿಂದ 240 ರ ವರೆಗಿನ ದಾಖಲಾತಿಗೆ ಒಟ್ಟು 7 ಹುದ್ದೆಯನ್ನು ನೀಡಲಾಗುತ್ತಿದೆ. ನಂತರ 241 ರಿಂದ ಮೇಲ್ಪಟ್ಟ ದಾಖಲಾತಿಗೆ 1 : 40 ಅನುಪಾತದಲ್ಲಿ ಶಿಕ್ಷಕರನ್ನು ನೀಡಲಾಗುತ್ತಿದೆ.<br>• ಸರ್ಕಾರಿ ಹಿರಿಯ ಪ್ರಾಥಮಿಕ 6, 7 ಮತ್ತು 8ನೇ ತರಗತಿಗಳಿರುವ ಶಾಲೆಯಲ್ಲಿ 1:35 ಅನುಪಾತದಲ್ಲಿ ಶಿಕ್ಷಕರನ್ನು ನೀಡಲಾಗುತ್ತಿದೆ.<br>**ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br>ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ 70 ವಿದ್ಯಾರ್ಥಿಗಳಿಗೆ ಒಂದು ವಿಭಾಗದಂತೆ 4 ವಿಭಾಗಗಳವರೆಗಿನ |

| | | |
|---|---|---|
| | | ಪ್ರೌಢಶಾಲೆಗಳಲ್ಲಿ ಸಿಬ್ಬಂದಿ ಸ್ವರ ವಿನ್ಯಾಸದ ಪ್ರಕಾರ ಮುಖ್ಯ ಶಿಕ್ಷಕರನ್ನು ಹೊರತುಪಡಿಸಿ 6 ವಿಷಯ ಶಿಕ್ಷಕರು ಹಾಗೂ 1 ದೈಹಿಕ ಶಿಕ್ಷಣ ಶಿಕ್ಷಕರು ಸೇರಿ ಒಟ್ಟು 7 ಹುದ್ದೆಗಳನ್ನು ನಿಗದಿಪಡಿಸಲಾಗಿದೆ. 5 ಅಥವಾ 5ಕ್ಕಿಂತ ಹೆಚ್ಚು ವಿಭಾಗಗಳು ಇದ್ದಲ್ಲಿ ಮುಖ್ಯ ಶಿಕ್ಷಕರನ್ನು ಹೊರತುಪಡಿಸಿ ಪ್ರತಿ ವಿಭಾಗಕ್ಕೆ 1.5 ಶಿಕ್ಷಕರಂತೆ ಒದಗಿಸಲಾಗುತ್ತಿದೆ. ಅದರಂತೆ ಹುದ್ದೆಗಳನ್ನು ಮಂಜೂರಾತಿ ನೀಡಲಾಗಿರುತ್ತದೆ. |

**ಇಪಿ 102 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು